**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ.**

**ವಿಷಯ**

ಸರ್ಕಾರಿ ಪದವಿ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ನೇಮಕಾತಿಗೊಂಡಿರುವವರಿಗೆ ರೂಪಿಸಿರುವ ನಿಯಮಾವಳಿಯಂತೆ ಒಂದು ಶೈಕ್ಷಣಿಕ ಸಾಲಿನಲ್ಲಿ 10 ತಿಂಗಳ ವೇತನ ಯಾರಿಗೂ ಸಿಗುತ್ತಿಲ್ಲ. ಯಾವುದೇ ರಜಾ ಸವಲತ್ತುಗಳಿರುವುದಿಲ್ಲ ಮತ್ತು ಸೇವಾ ಭದ್ರತೆ ಇಲ್ಲ. ಪ್ರತಿ ತಿಂಗಳೂ ಸಕಾಲದಲ್ಲಿ ವೇತನ ದೊರೆಯುತ್ತಿಲ್ಲ. ಯು.ಜಿ.ಸಿ. ನಿಯಮಾವಳಿಯಂತೆ ವೇತನ ನೀಡದೆ ಇರುವುದರಿಂದ ಅಡ್ಡಿ ಉಂಟಾಗುತ್ತಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ**

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರೆ ಬೇಡಿಕೆಗಳನ್ನು ಈಡೇರಿಸುವಂತೆ ಕೋರಿ ದಿನಾಂಕ:10.12.2021 ರಿಂದ ಮುಷ್ಕರ ನಡೆಸಿದ್ದ ಹಿನ್ನೆಲೆಯಲ್ಲಿ ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ಈ ಬಗ್ಗೆ ಉನ್ನತ ಅಧಿಕಾರಿಗಳ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ವಿಸ್ತೃತ ವರದಿಯನ್ನು ಸಲ್ಲಿಸಿರುತ್ತದೆ. ಸದರಿ ವರದಿಯನ್ನು ಪರಿಶೀಲಿಸಿ, ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14-01-2022 ಮತ್ತು 24-01-2022ರಲ್ಲಿ ಅತಿಥಿ ಉಪನ್ಯಾಸಕರುಗಳಿಗೆ ಗರಿಷ್ಠ 8/10 ಗಂಟೆಗಳ ಬದಲಾಗಿ ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಿ ಗೌರವಧನವನ್ನು ಈ ಕೆಳಕಂಡಂತೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-

2021-22ನೇ ಶೈಕ್ಷಣಿಕ ಸಾಲಿನಿಂದ ಗರಿಷ್ಠ 15/19 ಗಂಟೆಗಳ ಕಾರ್ಯಭಾರ ಹಾಗೂ ಭಾಗಶಃ ಲಭ್ಯವಾಗುವ ಕಾರ್ಯಭಾರಕ್ಕೆ ಅಗತ್ಯವಿರುವ ಅತಿಥಿ ಉಪನ್ಯಾಸಕರನ್ನು ಕೇಂದ್ರಿಕೃತ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ರಾಜ್ಯವ್ಯಾಪಿ ಮೆರಿಟ್/ಆಯ್ಕೆಪಟ್ಟಿ ಸಿದ್ಧಪಡಿಸಿ ನೇಮಿಸಿಕೊಳ್ಳಲಾಗುತ್ತಿದೆ.

ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವ ಹೊಂದಿರುವವರಿಗೆ ಆದ್ಯತೆ ಮೇರೆಗೆ ಪರಿಗಣಿಸಲಾಗುತ್ತಿದೆ.

ಮುಂದುವರೆದು, ಸರ್ಕಾರದ ಪತ್ರ ಸಂಖ್ಯೆ: ಇಡಿ 171 ಡಿಸಿಇ 2023(ಇ), ದಿನಾಂಕ:31.10.2023 ರನ್ವಯ ಅತಿಥಿ ಉಪನ್ಯಾಸಕರನ್ನು ಸೆಮಿಸ್ಟರ್ ಗೆ ಬದಲಾಗಿ, ಶೈಕ್ಷಣಿಕ ವರ್ಷಕ್ಕೆ (10 ತಿಂಗಳಿಗೆ ಮಾತ್ರ) ನೇಮಕ ಮಾಡಿಕೊಳ್ಳಲು ಅನುಮತಿ ನೀಡಲಾಗಿರುತ್ತದೆ.

ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಯಾವುದೇ ಖಾಲಿ ಹುದ್ದೆಗಳ ಎದುರಾಗಿ ನೇಮಕಾತಿ ಮಾಡಲಾಗುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಲಭ್ಯವಾಗುವ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಮಾತ್ರ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲಾಗುತ್ತದೆ. ಅಲ್ಲದೆ, ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಅವರು ಈ ಹಿಂದೆ ಸರ್ಕಾರಿ ಕಾಲೇಜುಗಳಲ್ಲಿ ಸಲ್ಲಿಸಿದ ಸೇವಾ ಅವಧಿಯನ್ನು ಆದ್ಯತೆ ಮೇರೆಗೆ ಪರಿಗಣಿಸಲಾಗುತ್ತದೆ.

....2.

152ನೇ & 31/01/28
R-72



ಪ್ರಸ್ತುತ 2023-24ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಗೌರವಧನ ಪಾವತಿಗಾಗಿ ಫೆಬ್ರುವರಿ, 2024ರ ವರೆಗೂ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ.

ಪ್ರಸ್ತುತ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವಂತಹ ಅತಿಥಿ ಉಪನ್ಯಾಸಕರುಗಳನ್ನು ಲಭ್ಯವಿರುವಂತಹ ಕಾರ್ಯಭಾರವನ್ನು ಗಮನದಲ್ಲಿರಿಸಿಕೊಂಡು ಇವರುಗಳನ್ನು 10 ತಿಂಗಳುಗಳ ಕಾಲದವರೆಗೆ ಶೈಕ್ಷಣಿಕ ವರ್ಷಕ್ಕೆ ಸೀಮಿತವಾಗಿ ಸೇವೆಯನ್ನು ತೆಗೆದುಕೊಳ್ಳುವುದರಿಂದ ಸದರಿಯವರುಗಳಿಗೆ ಸೇವಾ ಭದ್ರತೆ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ ಮತ್ತು ಇವರುಗಳು ಹೊಂದಿರುವ ವಿದ್ಯಾರ್ಹತೆ ಆಧಾರದ ಮೇಲೆ ಮತ್ತು ಸೇವಾನುಭವದ ಆಧಾರದ ಮೇಲೆ ಗೌರವಧನವನ್ನು ನೀಡಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಇವರುಗಳಿಗೆ ಯು.ಜಿ.ಸಿ. ನಿಯಮಾವಳಿಯಂತೆ ವೇತನವನ್ನು ನೀಡಲು ಅವಕಾಶವಿರುವುದಿಲ್ಲ.

2023-24ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳು ಸೇವಾ ಸಕ್ರಮಾತಿ, ಗೌರವಧನ ಹೆಚ್ಚಳ ಮತ್ತಿತರ ಬೇಡಿಕೆಗಳನ್ನು ಕೋರಿದ್ದಾರೆ. ಈ ಬಗ್ಗೆ ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡಂತೆ ಉನ್ನತ ಮಟ್ಟದ ಸಭೆ ನಡೆಸಿ ಬೇಡಿಕೆಗಳನ್ನು ಈಡೇರಿಸುವ ಕುರಿತು ಪರಿಶೀಲಿಸಲಾಗುತ್ತಿದೆ.

**ಇಡಿ 48 ಡಿಸಿಇ 2024 (ಇ)**

(ಸಹಿ)

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು